**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀ ಸತೀಶ ಕೆ.ಜೆ., ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜುಟ್ಟನಹಳ್ಳಿ ಗ್ರಾಮ ಪಂಚಾಯಿತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ರವರ ವಿರುದ್ಧ ನಡೆಸಲಾದ ಲೋಕಾಯುಕ್ತ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 40 ಗ್ರಾಪಂಕಾ 2018, ದಿನಾಂಕ:09.02.2018.
2. ಅಪರ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE/103/2018/ARE-9, Date:09.03.2020.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ:UPLOK-2/DE/103/2018/ARE-9, Date:10.03.2020.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 85 ಗ್ರಾಪಂಕಾ 2020, ದಿನಾಂಕ:21.03.2020.
5. ಆಪಾದಿತ ನೌಕರರು ಎರಡನೇ ಕಾರಣ ಕೇಳುವ ನೋಟೀಸ್‌ಗೆ ಸಲ್ಲಿಸಿರುವ ಸಮಜಾಯಿಷಿ ದಿನಾಂಕ:22.06.2020.

**ಪ್ರಸ್ತಾವನೆ :**

ಶ್ರೀ ಸತೀಶ ಕೆ.ಜೆ., ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜುಟ್ಟನಹಳ್ಳಿ ಗ್ರಾಮ ಪಂಚಾಯಿತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ರವರ ವಿರುದ್ಧ ಕರ್ತವ್ಯ ಲೋಪ ಹಾಗೂ ಸರ್ಕಾರಿ ಕೆಲಸದಲ್ಲಿ ಕರ್ತವ್ಯಲೋಪವೆಸಗಿರುವ ಆರೋಪದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮೇಲೆ ಓದಲಾದ ಕ್ರಮಾಂಕ(1)ರ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

**ದೋಷಾರೋಪಣೆ"**

ಶ್ರೀ ನರಸಿಂಹಮೂರ್ತಿ ತಂದೆ ಮುನಿಸ್ವಾಮಿ, ಪೂವಡಿಹಳ್ಳಿಗ್ರಾಮ, ಜುಟ್ಟನಹಳ್ಳಿ ಅಂಚೆ, ಶ್ರವಣಬೆಳಗೊಳ ಅಂಚೆ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರು ಈ ಕೆಳಕಂಡ ವಿಷಯದ ಬಗ್ಗೆ ಕರ್ನಾಟಕ ಲೋಕಾಯುಕ್ತ ರವರಿಗೆ ದೂರು ಸಲ್ಲಿಸಿರುತ್ತಾರೆ.

ಕರ್ನಾಟಕ ಪಂಚಾಯತ್(ಗ್ರಾಮ ಪಂಚಾಯತ್ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು-2006 ದಿನಾಂಕ:18.01.2016 ರಿಂದ ಜಾರಿಗೆ ಬಂದಿದ್ದು, ಬಿಲ್ಲುಗಳ ಪಾವತಿಯನ್ನು ಹೇಗೆ ಮಾಡಬೇಕು ಎನ್ನುವ ಬಗ್ಗೆ ಪ್ರತ್ಯೇಕ ನಿಯಮಗಳಿದ್ದು, ನಿಯಮ 49 ರಲ್ಲಿ ಚೆಕ್ಕುಗಳ ಮೂಲಕ ಹಣ ಪಡೆಯುವ ವಿಧಾನವನ್ನು ವಿವರಿಸುತ್ತಾ, ಅಧ್ಯಕ್ಷ ಮತ್ತು ಕಾರ್ಯದರ್ಶಿಗಳ ಸಹಿಯ ನಂತರ ಗ್ರಾಮ ಪಂಚಾಯಿತಿ ನಿಧಿಯಿಂದ ಚೆಕ್ ಮೂಲಕವೇ ಹಣವನ್ನು ಪಡೆದುಕೊಳ್ಳಬೇಕೇ ಹೊರತು ನೇರವಾಗಿ ನಿಧಿಯಿಂದ ಪಾವತಿಸುವಂತಿಲ್ಲ. ಗುತ್ತಿಗೆದಾರರಿಗೆ, ಸರಬರಾಜುದಾರರಿಗೆ ಮತ್ತು ಇತರರಿಗೆ ಸಂದಾಯ ಮಾಡಬೇಕಾದ ಪಾವತಿಯನ್ನು ಅವರ ಹೆಸರಿನ ಅಕೌಂಟ್ ಪೇ ಚೆಕ್ ಮುಖಾಂತರವೇ ನೀಡತಕ್ಕದ್ದು.

ರೂ. 50/- ಗಳಿಗಿಂತ ಕಡಿಮೆ ಹಣವನ್ನು ಪಾವತಿಸಬೇಕಾದ ಸಂದರ್ಭದಲ್ಲಿ ಮಾತ್ರ ನಗದಾಗಿ ಪಾವತಿಸತಕ್ಕದ್ದು. ಕಛೇರಿಯ ಖಾಯಂ ಮುಂಗಡದಿಂದ ಪಾವತಿಸಿದ ಹಣವನ್ನು ಬ್ಯಾಂಕ್ ನಿಂದ ಸ್ವಂತಕ್ಕೆ ಚೆಕ್ ನೀಡಿ ಹಣವನ್ನು ಪಡೆದುಕೊಂಡು ಮತ್ತೆ ಖಾಯಂ ಮುಂಗಡಕ್ಕೆ ಸೇರಿಸತಕ್ಕದ್ದು, ನಮೂನೆ-21 ರಲ್ಲಿ ಚೆಕ್ ನೀಡಿಕೆ ರಿಜಿಸ್ಟರ್ ಅನ್ನು ನಿರ್ವಹಿಸತಕ್ಕದ್ದು ಎಂಬುದಾಗಿ ಸ್ಪಷ್ಟವಾಗಿ ವಿಧಿಸಲಾಗಿದೆ. ಆದರೆ, ಆಪಾದಿತ ಸರ್ಕಾರಿ ನೌಕರರು ವಿವಿಧ ಸಾಮಗ್ರಿಗಳನ್ನು ಖರೀದಿಸಿದ ಬಾಬ್ತು ಸರಬರಾಜುದಾರರಿಗೆ ನೇರವಾಗಿ ಅಕೌಂಟ್ ಪೇಯಿ ಚೆಕ್ ಗಳನ್ನು ಕೊಡದೆ ಕರ್ನಾಟಕ ಪಂಚಾಯತ್(ಗ್ರಾಮ ಪಂಚಾಯತ್ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು-2006 ರ ನಿಯಮ 49ನ್ನು ಉಲ್ಲಂಘಿಸಿ ಕರ್ತವ್ಯಲೋಪ ಎಸಗಿರುವುದು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು-09, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಮೇಲ್ಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿ, ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವಿಚಾರಣಾಧಿಕಾರಿರವರ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಸದರಿಯವರ ವಿರುದ್ಧದ ಕರ್ತವ್ಯಲೋಪ ಆರೋಪವು ಸಾಬೀತಾಗಿರುವುದರಿಂದ ಇವರಿಗೆ **"ಎರಡು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಬೀರದಂತೆ ಐದು ವರ್ಷಗಳ ಅವಧಿಗೆ ತಡೆಹಿಡಿಯುವ"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಶ್ರೀ ಸತೀಶ ಕೆ.ಜಿ., ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜುಟ್ಟನಹಳ್ಳಿ ಗ್ರಾಮ ಪಂಚಾಯಿತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರಿಗೆ ನಿಯಮಾನುಸಾರ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿರುತ್ತದೆ. ಆಪಾದಿತ ನೌಕರರು ಮೇಲೆ ಓದಲಾದ ಕ್ರಮಾಂಕ(5) ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಕೆಳಗಿನಂತೆ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ.

ತಾನು ಕರ್ನಾಟಕ ಲೋಕಸೇವಾ ಆಯೋಗದಿಂದ ಹೊಸದಾಗಿ ನೇಮಕಗೊಂಡು ದಿನಾಂಕ:27.08.2014 ರಂದು ಜುಟ್ಟನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಕಾರ್ಯವರದಿ ಮಾಡಿಕೊಂಡಿರುತ್ತೇನೆ.ದಿನಾಂಕ:15.12.2014 ರಿಂದ 06.07.2015 ರ ಅವಧಿಯಲ್ಲಿ ಗ್ರಾಮ ಪಂಚಾಯಿತಿಯ ಕೆಲವು ವ್ಯಕ್ತಿಗಳಿಗಾಗಿ ಸಿಬ್ಬಂದಿಯ ಹೆಸರಿಗೆ ಅಕೌಂಟ್ ಪೇ ಮುಖಾಂತರ ಚೆಕ್ ವಿತರಿಸಿದ್ದು, ಗ್ರಾಮ ಪಂಚಾಯಿತಿಯಲ್ಲಿ ಆಡಳಿತಾತ್ಮಕ ವೆಚ್ಚಗಳು, ಸಭೆಗಳಿಗೆ ಕಾಫಿ, ತಿಂಡಿ ವ್ಯವಸ್ಥೆಗಾಗಿ, ದಾಖಲಾತಿಗಳ ಜೆರಾಕ್ಸ್ ಮಾಡಿಸಲು, ಅಧ್ಯಕ್ಷರ ಚುನಾವಣೆಗಾಗಿ ಸರ್ಕಾರದ ಆದೇಶದಂತೆ ಚುನಾವಣಾಧಿಕಾರಿಯ ವೆಚ್ಚ, ಕರ್ನಾಟಕ ಪಂಚಾಯತ್ ಪರಿಷತ್‌ಗೆ ಡಿ.ಡಿ ತೆಗೆಯಲು ದೂರವಾಣಿ ಮತ್ತು ವಿದ್ಯುತ್ ಬಿಲ್ ಪಾವತಿಸಲು ಗ್ರಾಮ ಪಂಚಾಯಿತಿಯ ಸ್ವಂತ ಸಂಪನ್ಮೂಲದಿಂದ ಪಾವತಿಸಲು ಅವಕಾಶವಿರುತ್ತದೆ. ಆದರೆ, ಕೆಲವು ಸಂದರ್ಭಗಳಲ್ಲಿ ಗ್ರಾಮ ಪಂಚಾಯಿತಿಯ ತೆರಿಗೆ ವಸೂಲಾತ ಇಲ್ಲದಿರುವಾಗ ಸ್ಥಳೀಯ ಸಿಬ್ಬಂದಿಗಳ ನೆರವಿನೊಂದಿಗೆ ಸಾಲದ ರೂಪದಲ್ಲಿ ಕೆಲವು ವೆಚ್ಚಗಳನ್ನು ಮಾಡಲಾಗಿದ್ದು, ತೆರಿಗೆ ವಸೂಲಿಯ ನಂತರ ಸದರಿ ಹಣವನ್ನು ಬ್ಯಾಂಕ್ ಖಾತೆಗೆ ಜಮಾ ಮಾಡಿ ನಂತರ ಸದರಿ ಸಾಲದ ಬಾಬ್ತನ್ನು ತೀರಿಸುವ ಸಂಬಂಧ ಸದರಿ ಸಿಬ್ಬಂದಿಗಳಿಗೆ ಅಕೌಂಟ್ ಪೇ ಮುಖಾಂತರ ಚೆಕ್ ವಿತರಿಸಿ ಯಾವುದೇ ಹಣ ದುರುಪಯೋಗವಾಗದಂತೆ ಕರ್ತವ್ಯ ನಿರ್ವಹಿಸಿರುವುದಾಗಿ ತಿಳಿಸಿರುತ್ತಾರೆ. ಹೊಸದಾಗಿ ಸೇವೆಗೆ ಸೇರಿದ ನಂತರ ಈ ಅವಧಿಯಲ್ಲಿ ಯಾವುದೇ ತರಬೇತಿ ನೀಡಿರುವುದಿಲ್ಲ ಹಾಗೂ ಸೇರಿದ 10 ತಿಂಗಳ ಅವಧಿಯಲ್ಲಿ 18 ಚೆಕ್ಕುಗಳನ್ನು

...3

ವಿತರಿಸಿದ್ದು, ಸದರಿ ಅವಧಿಯು ತನ್ನ ಪರಿಕ್ಷಾರ್ಥ ಅವಧಿಯಾಗಿದ್ದು, ಸೇವಾ ಅನುಭವ ಕೊರತೆಯಿಂದಾಗಿ ಪ್ರಕ್ರಿಯಾ ಲೋಪವಾಗಿದ್ದು, ಈ ಆರೋಪದಿಂದ ತನ್ನನ್ನು ಆರೋಪಮುಕ್ತಗೊಳಿಸುವಂತೆ ಕೋರಿರುತ್ತಾರೆ

ಆಪಾದಿತ ನೌಕರರ ಸಮಜಾಯಿಷಿಯನ್ನು ಪರಿಶೀಲಿಸಲಾಗಿದೆ. ಆರೋಪಿತ ನೌಕರರು ತಮ್ಮ ವಿರುದ್ಧದ ಆರೋಪಗಳನ್ನು ಅಲ್ಲಗಳೆಯುವಂತಹ ಸೂಕ್ತ ದಾಖಲೆಗಳನ್ನು ಸಲ್ಲಿಸದಿರುವ ಕಾರಣ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸಿನಂತೆ ಶ್ರೀ ಸತೀಶ ಕೆ.ಜೆ., ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜುಟ್ಟನಹಳ್ಳಿ ಗ್ರಾಮ ಪಂಚಾಯಿತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ **"ಎರಡು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಬೀರದಂತೆ ಐದು ವರ್ಷಗಳ ಅವಧಿಗೆ ತಡೆಹಿಡಿಯುವ"** ದಂಡನೆ ವಿಧಿಸಲು ಸರ್ಕಾರವು ನಿರ್ಧರಿಸಿ, ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 85 ಗ್ರಾಪಂಕಾ 2020 , ಬೆಂಗಳೂರು, ದಿನಾಂಕ:21.01.2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸತೀಶ ಕೆ.ಜೆ., ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜುಟ್ಟನಹಳ್ಳಿ ಗ್ರಾಮ ಪಂಚಾಯಿತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ರವರ ವಿರುದ್ಧದ ಆರೋಪಗಳು ಸಾಬೀತಾಗಿರುವುದರಿಂದ ಇವರಿಗೆ **"ಎರಡು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಬೀರದಂತೆ ಐದು ವರ್ಷಗಳ ಅವಧಿಗೆ ತಡೆಹಿಡಿಯುವ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 21/01/21
(ನವೀನ್‌ಕುಮಾರ್ ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ,(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.(ಜಿ.ಪಂ)

**<u>ಗೆ,</u>**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ ಕಾಳಿದಾಸ ಮಾರ್ಗ, ಬೆಂಗಳೂರು-09
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಚನ್ನರಾಯಪಟ್ಟಣ, ಹಾಸನ ಜಿಲ್ಲೆ.
7. ಶ್ರೀ ಸತೀಶ ಕೆ.ಜೆ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜುಟ್ಟನಹಳ್ಳಿ ಗ್ರಾಮ ಪಂಚಾಯಿತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ .
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.